**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಅತಿಥಿ ಉಪನ್ಯಾಸಕರುಗಳಿಗೆ ಇಡಿಗಂಟು ಸೌಲಭ್ಯವನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿಗಳನ್ನು ಹೊರಡಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಡಿಸಿಇ 2024, ದಿನಾಂಕ: 04.03.2024 ಮತ್ತು ತಿದ್ದುಪಡಿ ಆದೇಶ ದಿನಾಂಕ:16.03.2024.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಇ-ಕಛೇರಿ ಕಡತ ಸಂಖ್ಯೆ: DCE/APT1/GFH/7/2024 ಮತ್ತು ಪತ್ರ ದಿನಾಂಕ: 15.02.2025

*******

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ವಿವಿಧ ಸೌಲಭ್ಯಗಳನ್ನು ದಿನಾಂಕ:01.01.2024ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಿದೆ. ಆ ಪೈಕಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿದ 60 ವರ್ಷ ಮೀರಿದ ಅತಿಥಿ ಉಪನ್ಯಾಸಕರುಗಳಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ. 50,000/-ಗಳಂತೆ ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ನೀಡಲು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಕಡತ ಮತ್ತು ಪತ್ರದಲ್ಲಿ ನಿವೃತ್ತ ಅತಿಥಿ ಉಪನ್ಯಾಸಕರಿಗೆ ಇಡಿಗಂಟು ಸೌಲಭ್ಯವನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ಮತ್ತು ಸದರಿ ಇಡಿಗಂಟು ಯೋಜನೆಯು ಜಾರಿಯಾದ ದಿನಾಂಕ:01-01-2024 ರ ಹಿಂದಿನ 05 ಶೈಕ್ಷಣಿಕ ವರ್ಷಗಳಲ್ಲಿ (2023-24, 2022-23, 2021-22, 2020-21 ಮತ್ತು 2019-20) ಕನಿಷ್ಠ 01 ವರ್ಷ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ಯೋಜನೆ ಜಾರಿಯಾದ ದಿನಾಂಕ:01-01-2024ರ ನಂತರ 60 ವರ್ಷಗಳ ವಯೋಮಿತಿ ಪೂರೈಸಲಿರುವವರನ್ನೂ ಒಳಗೊಂಡ ಅತಿಥಿ ಉಪನ್ಯಾಸಕರ ಪರಿಷ್ಕರಿಸಿದ ಮಾಹಿತಿ ಹಾಗೂ ಅಗತ್ಯವಿರುವ ಅಂದಾಜು ಅನುದಾನದ ವಿವರಗಳನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರು ಸಲ್ಲಿಸಿರುತ್ತಾರೆ.

ಈ ಕುರಿತು ಪರಿಶೀಲಿಸಲಾಗಿ, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಅತಿಥಿ ಉಪನ್ಯಾಸಕರುಗಳಿಗೆ ಇಡಿಗಂಟು ಸೌಲಭ್ಯವನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನೀಡಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಡಿ 208 ಡಿಸಿಇ 2024(ಇ)**
**ಬೆಂಗಳೂರು, ದಿನಾಂಕ:30.05.2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿ 60 ವರ್ಷ ವಯೋಮಿತಿ ಪೂರೈಸಿದ ಮತ್ತು ಮರಣ ಹೊಂದಿದ ಅತಿಥಿ ಉಪನ್ಯಾಸಕರುಗಳಿಗೆ ಇಡಿಗಂಟು ಸೌಲಭ್ಯವನ್ನು ಈ ಕೆಳಕಂಡ ಮಾರ್ಗಸೂಚಿಗಳೊಂದಿಗೆ ಅನುಷ್ಠಾನಗೊಳಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

prabhavaa.com

1. ಇಡುಗಂಟು ಯೋಜನೆಯು ದಿನಾಂಕ:01-01-2024 ರಿಂದ ಜಾರಿಗೆ ಬಂದಿದ್ದು, ಸದರಿ ದಿನಾಂಕದಂದು ಅಥವಾ ನಂತರದಲ್ಲಿ 60 ವರ್ಷ ವಯೋಮಿತಿ ಪೂರೈಸಿದ ಅಥವಾ ಮರಣ ಹೊಂದಿದ ಅತಿಥಿ ಉಪನ್ಯಾಸಕರಿಗೆ ಮಾತ್ರ ಅನ್ವಯಿಸುತ್ತದೆ.
2. ಯೋಜನೆ ಜಾರಿಯಾಗುವ ದಿನಾಂಕ:01-01-2024ಕ್ಕೆ ಹಿಂದಿನ 5 ವರ್ಷಗಳಲ್ಲಿ ಕನಿಷ್ಠ 01 ವರ್ಷ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರಬೇಕು ಅಥವಾ ದಿ:01-01-2024ರ ನಂತರ 60 ವರ್ಷ ವಯೋಮಿತಿ ಪೂರೈಸಿದ ಅಥವಾ ಮರಣ ಹೊಂದಿದ ಅತಿಥಿ ಉಪನ್ಯಾಸಕರು, ಅವರುಗಳು 60 ವರ್ಷ ವಯೋಮಿತಿ ಪೂರೈಸಿದ ಅಥವಾ ಮರಣ ಹೊಂದಿದ ದಿನಾಂಕದಿಂದ ಹಿಂದಿನ 5 ವರ್ಷಗಳಲ್ಲಿ ಕನಿಷ್ಠ 01 ವರ್ಷ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರಬೇಕು.
3. ಇಡುಗಂಟು ಸೌಲಭ್ಯವನ್ನು ಕ್ಲೇಮು ಮಾಡುವ ಅತಿಥಿ ಉಪನ್ಯಾಸಕರು ಸರ್ಕಾರ ಅಥವಾ ಸರ್ಕಾರದ ಅನುದಾನಕ್ಕೊಳಪಟ್ಟ ಸಂಸ್ಥೆಗಳಲ್ಲಿ ನೇಮಕಾತಿ ಹೊಂದಿ ಸೇವೆ ಸಲ್ಲಿಸಿದ್ದಲ್ಲಿ, ಅಂತಹ ಅತಿಥಿ ಉಪನ್ಯಾಸಕರಿಗೆ ಈ ಇಡಿಗಂಟು ಯೋಜನೆಯು ಅನ್ವಯವಾಗುವುದಿಲ್ಲ.
4. ಇಡುಗಂಟು ಯೋಜನೆಗೆ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿದ ಅನುಭವವನ್ನು ಆಯಾ ಕಾಲೇಜು ಪ್ರಾಂಶುಪಾಲರು ನಿಗದಿತ ನಮೂನೆಯಲ್ಲಿ ನೀಡಿದ ಸೇವಾ ಪ್ರಮಾಣ ಪತ್ರಗಳ ಆಧಾರದಲ್ಲಿ ಲೆಕ್ಕ ಹಾಕಲಾಗುವುದು.
5. ಇಡುಗಂಟು ಯೋಜನೆಯು ಪ್ರತಿ ವರ್ಷಕ್ಕೆ ರೂ.50,000/- ದರದಲ್ಲಿದ್ದು, ಅತಿಥಿ ಉಪನ್ಯಾಸಕರ ಸೇವೆಯ ವರ್ಷಗಳ ಸಂಖ್ಯೆಗೆ ಅನುಗುಣವಾಗಿದ್ದು, ಗರಿಷ್ಠ ಮೌಲ್ಯ ರೂ.5,00,000/- ಆಗಿರುತ್ತದೆ.
6. ಪ್ರತಿ ಶೈಕ್ಷಣಿಕ ವರ್ಷದ 8 ತಿಂಗಳು ಮತ್ತು ಹೆಚ್ಚಿನ ಅವಧಿಯ (ಅಂದರೆ, ಶೈಕ್ಷಣಿಕ ವರ್ಷದಲ್ಲಿ 240 ದಿನಗಳ) ಸೇವೆಯನ್ನು ಒಂದು ವರ್ಷ ಎಂದು ಪರಿಗಣಿಸಲಾಗುವುದು. ಶೈಕ್ಷಣಿಕ ವರ್ಷದಲ್ಲಿನ 8 ತಿಂಗಳಿಗಿಂತ ಕಡಿಮೆ ಅವಧಿಯ ಸೇವೆಯನ್ನು ಭಾಗಶಃ ವರ್ಷವೆಂದೂ ಪರಿಗಣಿಸಿ ಒಟ್ಟು ಸೇವಾವಧಿಗೆ ಪರಿಗಣಿಸಲಾಗುವುದು.
7. ಮೇಲಿನ ನಿಯಮಗಳಂತೆ ಅತಿಥಿ ಉಪನ್ಯಾಸಕರು ಇಡುಗಂಟು ಯೋಜನೆಗೆ ಅರ್ಹರಿದ್ದು ಮರಣ ಹೊಂದಿದ್ದಲ್ಲಿ ಅವರಿಂದ ನಾಮನಿರ್ದೇಶನಗೊಂಡಿರುವ ವ್ಯಕ್ತಿಗೆ ಇಡಿಗಂಟಿನ ಮೊತ್ತವನ್ನು ನೀಡಲಾಗುವುದು ಅಥವಾ ಅಂತಹ ಅರ್ಹ ಅತಿಥಿ ಉಪನ್ಯಾಸಕರ ಕುಟುಂಬದ ಕಾನೂನುಬದ್ಧ ವಾರಸುದಾರರ (Legal Heirs) ಬ್ಯಾಂಕ್ ಖಾತೆಗೆ ಇಡುಗಂಟು ಮೊತ್ತವನ್ನು ವರ್ಗಾಯಿಸುವುದು.
8. ಈ ಮೇಲಿನ ನಿಯಮಗಳನ್ವಯ ಅರ್ಹ ಅತಿಥಿ ಉಪನ್ಯಾಸಕರು ಇಡುಗಂಟು ಕ್ಲೇಮು ಪ್ರಸ್ತಾವನೆಯನ್ನು ಸಂಬಂಧಪಟ್ಟ ಕಾಲೇಜಿನ (ಅಂದರೆ 60 ವರ್ಷ ಪೂರೈಸುವ ವರ್ಷದಲ್ಲಿ/ಪೂರ್ವದಲ್ಲಿ ಕರ್ತವ್ಯ ನಿರ್ವಹಿಸಿದ ಕಾಲೇಜು) ಪ್ರಾಂಶುಪಾಲರ ಮೂಲಕ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 9 ವೆಚ್ಚ-8/2024, ದಿನಾಂಕ: 26.05.2025ರಲ್ಲಿನ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

30.05.25

**(ಸಂಜಯ್ . ಬಿ . ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) ಮತ್ತು (ಜಿ ಮತ್ತು ಎಸ್ಎಸ್ಎ) ಮತ್ತು (ಇ ಮತ್ತು ಆರ್ಎಸ್ಎ), ರವರ ಕಾರ್ಯದರ್ಶಿ, "ಆಡಿಟ್ ಭವನ", ಬೆಂಗಳೂರು-560001.

prabhavaa.com